ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಚ್.ಆರ್. ನಾಗೇಂದ್ರ),
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು. ಇಲಾಖೆ. (ಸೇವೆಗಳು-2).

ಪಿ.ಆರ್. 1158

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ : ಶ್ರೀ ಬಿ.ಸಿ. ಮುಧೋಳ್, ನಿವೃತ್ತ ಮುಖ್ಯ ಇಂಜಿನಿಯರ್, ಅವರ ವಿರುದ್ಧ ಇಲಾಖೆ ವಿಚಾರಣೆ – ಮಂಡನಾಧಿಕಾರಿ ನೇಮಕ ಪರಿಷ್ಕೃತ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ :

1) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 51 ಎಸ್ಇಎನ್ 05, ದಿನಾಂಕ 08.06.2007.
2) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 51 ಎಸ್ಇಎನ್ 05, ದಿನಾಂಕ 22.09.2008.
3) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 51 ಎಸ್ಇಎನ್ 05, ದಿನಾಂಕ 27.02.2009.
4) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 51 ಎಸ್ಇಎನ್ 2005. ದಿನಾಂಕ 06.07.2009.
5) ಶ್ರೀ ಆರ್. ರಂಗನಾಥ್, ಕಾರ್ಯಪಾಲಕ ಇಂಜಿನಿಯರ್, ಇವರ ಮನವಿ ದಿನಾಂಕ : 16.04.2010.

ಪ್ರಸ್ತಾವನೆ :

ಶ್ರೀ ಬಿ.ಸಿ. ಮುಧೋಳ್, ನಿವೃತ್ತ ಮುಖ್ಯ ಇಂಜಿನಿಯರ್, ಅವರು ಬಾಗಲಕೋಟೆ ನಗರ ಅಭಿವೃದ್ಧಿ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ, ಪ್ರಾಧಿಕಾರದ ವ್ಯಾಪ್ತಿಯಲ್ಲಿ 300 ಕಾಮಗಾರಿಗಳ ಅಂದಾಜು ಪಟ್ಟಿಯನ್ನು ಸಿದ್ದಪಡಿಸದೇ ತಮಗೆ ಬೇಕಾದ ಕಂಟ್ರಾಕ್ಟರುಗಳಿಗೆ ಗುತ್ತಿಗೆ ನೀಡಿ, ಅವುಗಳು ಪೂರ್ಣಗೊಳ್ಳದೆ ಅರ್ಧಕ್ಕೆ ನಿಂತಿದ್ದರೂ ಸಹ ಅವುಗಳ ಗುಣಮಟ್ಟ ಅರಿಯದೇ ಪೂರ್ಣ ಹಣವನ್ನು ಪಾವತಿ ಮಾಡಿದ್ದು, ಆಲಮ್ ಕೂರಿನ್ ಮತ್ತು ಪ್ರಾಧಿಕಾರಕ್ಕೆ ಅವಶ್ಯಕತೆಗಿಂತ ಹೆಚ್ಚಾಗಿ ವಾಟರ್ ಮೀಟರ್ ಖರೀದಿಯಲ್ಲಿ ಅವ್ಯವಹಾರ ಎಸಗಿ ಪಾರದರ್ಶಕತೆ ಕಾಯಿದೆಗಳನ್ನು ಪಾಲಿಸದೆ ಸರ್ಕಾರದ ಹಣವನ್ನು ದುರುಪಯೋಗಪಡಿಸಿರುವ ಆರೋಪಿಗಳಿಗಾಗಿ ಶ್ರೀ ಬಿ.ಸಿ. ಮುಧೋಳ್ ಅವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11, 11-ಎ ರನ್ವಯ ಇಲಾಖಾ ವಿಚಾರಣೆ ಜರುಗಿಸಲು ಮೇಲೆ (1) ರಲ್ಲಿ ಓದಲಾದ ದಿನಾಂಕ : 08-06-2007ರ ಸರ್ಕಾರದ ಆದೇಶದಲ್ಲಿ ಶ್ರೀ ಬಿ. ರಂಗಸ್ವಾಮಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಯಾಗಿ ಮತ್ತು ಶ್ರೀಮತಿ ಹೇಮಲತಾ, ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಉಡುಪಿ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲಾಗಿತ್ತು. ಮೇಲೆ ಓದಲಾದ ಕ್ರಮಸಂಖ್ಯೆ (2)ರ ಆದೇಶದಲ್ಲಿ ಶ್ರೀಮತಿ ಹೇಮಲತಾ ಇವರು ಮನವಿ ಸಲ್ಲಿಸಿ, ಮಂಡನಾಧಿಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತಿಲ್ಲವಾದ ಕಾರಣ ಈ ಪ್ರಕರಣದ ಮಂಡನಾಧಿಕಾರಿ ಜವಾಬ್ದಾರಿಯಿಂದ ಬಿಡುಗಡೆಗೊಳಿಸುವಂತೆ ಕೋರಿದ ಹಿನ್ನೆಲೆಯಲ್ಲಿ ದಿನಾಂಕ 22-09-2008 ರಂದು ಶ್ರೀ ಪಾಲಯ್ಯ, ನಿಬಂಧಕರು, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದರಾವ್ ವೃತ್ತ, ಬೆಂಗಳೂರು, ಇವರನ್ನು ಮಂಡನಾಧಿಕಾರಿಯಾಗಿ ನೇಮಕ ಮಾಡಲಾಗಿತ್ತು. ನಂತರ ಕ್ರಮ ಸಂಖ್ಯೆ (3)

ರಲ್ಲಿ ಓದಲಾದ ಆದೇಶದಲ್ಲಿ ಮಂಡನಾಧಿಕಾರಿಯಾಗಿ ನೇಮಕವಾಗಿದ್ದ ಶ್ರೀ ಪಾಲಯ್ಯ ಇವರ ಬದಲಿಗೆ ಶ್ರೀ ಕೆ.ಆರ್. ಶ್ರೀನಿವಾಸ ರಂಗನ್, ಕಾರ್ಯಪಾಲಕ ಇಂಜಿನಿಯರ್, ಕೃಷ್ಣ-ಗೋದಾವರಿ ಘಟಕ ಮತ್ತು ಅಂತರ್ ರಾಜ್ಯ ಜಲ, ಜಲಸಂಪನ್ಮೂಲ ಸಂಸ್ಥೆ, ಬೆಂಗಳೂರು ಇವರನ್ನು ನೇಮಕ ಮಾಡಲಾಗಿತ್ತು. ಕ್ರಮ ಸಂಖ್ಯೆ (4) ರಲ್ಲಿ ಮುಖ್ಯ ಇಂಜಿನಿಯರ್ (ಅಂತರ್ ರಾಜ್ಯ), ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರು ಮನವಿ ಸಲ್ಲಿಸಿ ಶ್ರೀ ಕೆ.ಆರ್. ಶ್ರೀನಿವಾಸ ರಂಗನ್, ಕಾರ್ಯಪಾಲಕ ಇಂಜಿನಿಯರ್, ಇವರಿಗೆ ಕಾರ್ಯದ ಒತ್ತಡ ಹಾಗೂ ಕೃಷ್ಣ ನ್ಯಾಯಾಧೀಕರಣ ಕಲಾಪಗಳು ತ್ವರಿತ ಗತಿಯಲ್ಲಿ ನಡೆಯುತ್ತಿರುವುದರಿಂದ ಇವರ ಬದಲು ಶ್ರೀ ಆರ್. ರಂಗನಾಥ, ಕಾರ್ಯಪಾಲಕ ಇಂಜಿನಿಯರ್, ಕಾವೇರಿ ಜಲ ವಿವಾದ ಘಟಕ, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಕೋರಿದ್ದರು. ಮೇಲೆ ಓದಲಾದ (5)ರ ಪತ್ರದಲ್ಲಿ ಶ್ರೀ ಆರ್. ರಂಗನಾಥ, ಕಾರ್ಯಪಾಲಕ ಇಂಜಿನಿಯರ್ ಇವರು, ತಾವು ವರ್ಗಾವಣೆಯಾಗಿ ಕಡ್ಡಾಯ ನಿರೀಕ್ಷಣಾ ಅವಧಿಯಲ್ಲಿರುವುದಾಗಿ ತಿಳಿಸಿರುವುದರಿಂದ ಅವರ ಬದಲಿಗೆ ಆ ಸ್ಥಾನದಲ್ಲಿ ವರ್ಗಾವಣೆಗೊಂಡ ಶ್ರೀ ಪಿ. ರಾಮಕುಮಾರ್, ಕಾರ್ಯಪಾಲಕ ಇಂಜಿನಿಯರ್ ಅವರನ್ನು ಮಂಡನಾಧಿಕಾರಿಯಾಗಿ ನೇಮಿಸುವ ಬಗ್ಗೆ ಪರಿಶೀಲಿಸಿದ ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂ : ಸಿಆಸುಇ 51 ಎಸ್‌ಇಎನ್ 2005, ಬೆಂಗಳೂರು, ದಿನಾಂಕ : 30-04-2010

ಪ್ರಸ್ತಾವನೆಯಲ್ಲಿ ವಿವರಿಸಲ್ಪಟ್ಟ ಕಾರಣಗಳಿಂದಾಗಿ, ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 51 ಎಸ್‌ಇಎನ್ 2005, ದಿನಾಂಕ 06-07-2009 ನ್ನು ಮಾರ್ಪಡಿಸಿ, ಶ್ರೀ ಆರ್. ರಂಗನಾಥ, ಕಾರ್ಯಪಾಲಕ ಇಂಜಿನಿಯರ್, ಇವರ ಸ್ಥಾನದಲ್ಲಿ ಶ್ರೀ ಪಿ. ರಾಮಕುಮಾರ್, ಕಾರ್ಯಪಾಲಕ ಇಂಜಿನಿಯರ್, ಕಾವೇರಿ ಜಲ ವಿವಾದ ಘಟಕ, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರನ್ನು ಈ ಪ್ರಕರಣದಲ್ಲಿ ಮಂಡನಾಧಿಕಾರಿಯಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 11(5)(ಸಿ) ಅನ್ವಯ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಂ.ಎಸ್. ಶಿವರಾಮ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
(ಸೇವೆಗಳು-3).

ಪಿ.ಆರ್. 1159

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ : ಶ್ರೀಮತಿ ಸಿ.ವಿ. ಮಂಜುಳ, ಭಾಷಾಂತರಕಾರರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ಸ್ವಯಂಚಾಲಿತ ವಿಶೇಷ ವೇತನ ಬಡ್ತಿ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ :

1) ಆದೇಶ ಸಂಖ್ಯೆ : ಸಿಆಸುಇ 124 ಸೇಲೋಯ 2004, ದಿನಾಂಕ 21.02.2005.

2) ಕರ್ನಾಟಕ ಲೋಕಾಯುಕ್ತದ ನಿಬಂಧಕರ ದಿನಾಂಕ 20.10.2009ರ ಪತ್ರ ಸಂಖ್ಯೆ : ಲೋಕ/ಸಿಬ್ಬಂದಿ (1)/03/2009-10.

ಪ್ರಸ್ತಾವನೆ :

ಶ್ರೀಮತಿ ಸಿ.ವಿ. ಮಂಜುಳ, ಭಾಷಾಂತರಕಾರರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಒಂದೇ ಹುದ್ದೆಯಲ್ಲಿ ಮುಂಬಡ್ತಿ ಇಲ್ಲದೇ ದಿನಾಂಕ 16-08-2009 ಕ್ಕೆ 15 ವರ್ಷಗಳ ಸತತ ಸೇವೆಯನ್ನು ಪೂರ್ಣಗೊಳಿಸಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿ) ನಿಯಮಗಳು 1991 ರನ್ವಯ ಭಾಷಾಂತರಕಾರರ ಹುದ್ದೆಗೆ ನಿಗದಿಪಡಿಸಿರುವ ಹಿರಿಯ ವೇತನ ಶ್ರೇಣಿ 12000-22650 ನ್ನು ಮಂಜೂರು ಮಾಡಲು ಮೇಲೆ (1) ರಲ್ಲಿ ಓದಲಾಗಿರುವ ದಿನಾಂಕ 20-10-2009ರ ಪತ್ರದಲ್ಲಿ ಕರ್ನಾಟಕ ಲೋಕಾಯುಕ್ತದ ನಿಬಂಧಕರು ಶಿಫಾರಸು ಮಾಡಿರುವರು. ಲೋಕಾಯುಕ್ತ ಸಂಸ್ಥೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಭಾಷಾಂತರಕಾರರ ಹುದ್ದೆಯಿಂದ ಮುಂಬಡ್ತಿ ನೀಡುವ ಅಸ್ಪದವನ್ನು ಕಲ್ಪಿಸಿರುವುದಿಲ್ಲ. ಶ್ರೀಮತಿ ಸಿ.ವಿ. ಮಂಜುಳರವರಿಗೆ ಮೇಲೆ (1) ರಲ್ಲಿ ಓದಲಾದ ಆದೇಶದ ಮೂಲಕ 10 ವರ್ಷಗಳ ಸೇವೆ ಸಲ್ಲಿಸಿರುವುದಕ್ಕೆ ಕಾಲಬದ್ಧ ಮುಂಬಡ್ತಿಯನ್ನು ಮಂಜೂರು ಮಾಡಲಾಗಿದೆ. ನಿಬಂಧಕರು, ಲೋಕಾಯುಕ್ತ ಇವರು ಶಿಫಾರಸ್ಸು ಮಾಡಿರುವಂತೆ ಈ ಅಧಿಕಾರಿಗೆ ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿ ನೀಡಬೇಕಾಗಿರುತ್ತದೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂ : ಸಿಆಸುಇ 200 ಸೇಲೋಯು 2009, ಬೆಂಗಳೂರು, ದಿನಾಂಕ : 29-04-2010

ಶ್ರೀಮತಿ ಸಿ.ಪಿ. ಮಂಜುಳ, ಭಾಷಾಂತರಕಾರರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ಕರ್ನಾಟಕ ನಾಗರೀಕ ಸೇವಾ (ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿ) ನಿಯಮಗಳು 1991 ರನ್ವಯ ಭಾಷಾಂತರಕಾರರ ಹುದ್ದೆಯಲ್ಲಿ ಸ್ವಯಂಚಾಲಿತ ವಿಶೇಷ ಬಡ್ತಿಯನ್ನು ಹಿರಿಯ ವೇತನ ಶ್ರೇಣಿ ರೂ. 12,000–300–12,300–350–14,400–400–16,800–450–19,500–525–22650 ರಲ್ಲಿ ದಿನಾಂಕ : 17–08–2009 ರಿಂದ ಜಾರಿಗೆ ಬರುವಂತೆ ಸ್ವಯಂಚಾಲಿತ ವಿಶೇಷ ಮುಂಬಡ್ತಿಯನ್ನು ಮಂಜೂರು ಮಾಡಲಾಗಿದೆ. ಇವರ ವೇತನವನ್ನು ಕಾಲಾನುಕ್ರಮವಾಗಿ ಮರುನಿಗದಿಪಡಿಸಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ಪಿ. ಮಾರ್ಕಂಡೇಯ)

ಸರ್ಕಾರದ ಅಧೀನ ಕಾರ್ಯದರ್ಶಿ,

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.

ಪಿ.ಆರ್. 1160 (ಸೇವಾ ನಿಯಮಗಳು–2).

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ : ಕರ್ನಾಟಕ ಸರ್ಕಾರ ಸಚಿವಾಲಯದ ಜಲಸಂಪನ್ಮೂಲ ಇಲಾಖೆಯಲ್ಲಿನ ಕೃಷ್ಣಾ ಭಾಗ್ಯ ಜಲ ನಿಗಮ ವಿಶೇಷ ಕೋಶವನ್ನು ಹಾಗೂ ಹುದ್ದೆಗಳನ್ನು ಮುಂದುವರೆಸುವ ಬಗ್ಗೆ.

ಓದಲಾಗಿದೆ :

1) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 14 ಸಸಿವಿ 1994, ದಿನಾಂಕ 07.07.1994.

2) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 34 ಸಸಿವಿ 1999, ದಿನಾಂಕ 22.10.1999.

3) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 09 ಸಸಿವಿ 2007, ದಿನಾಂಕ 02.03.2007.

4) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 233 ಸ.ಅ.ಸೇ. 2009, ದಿನಾಂಕ 15.05.2009.

5) ಜಲಸಂಪನ್ಮೂಲ ಇಲಾಖೆ ಕಡತ ಸಂಖ್ಯೆ : ಜಸಂಇ 50 ಕೆಬಿಎನ್ 10.

ಪ್ರಸ್ತಾವನೆ :

ಮೇಲೆ ಓದಲಾದ (1) ಮತ್ತು (2)ರ ಸರ್ಕಾರದ ಆದೇಶದಲ್ಲಿ ಜಲಸಂಪನ್ಮೂಲ ಇಲಾಖೆಯಲ್ಲಿ ಕೃಷ್ಣಾ ಭಾಗ್ಯ ಜಲ ನಿಗಮದ ಪ್ರಾರಂಭಿಕ ಕಾರ್ಯಗಳನ್ನು ನಿರ್ವಹಿಸಲು ಈ ಕೆಳಕಂಡ ಹುದ್ದೆಗಳನ್ನು ಒಳಗೊಂಡಂತೆ ಕೃಷ್ಣಾ ಭಾಗ್ಯ ಜಲ ನಿಗಮದ ವಿಶೇಷ ಕೋಶವನ್ನು ಸೃಜಿಸಲಾಗಿದೆ. ಈ ತಾತ್ಕಾಲಿಕ ಹುದ್ದೆಗಳನ್ನು ಕಾಲಕಾಲಕ್ಕೆ ಮುಂದುವರಿಸಲಾಗಿದ್ದು. ಮೇಲೆ ಓದಲಾದ (4)ರ ಸರ್ಕಾರದ ಆದೇಶದಲ್ಲಿ ವಿಶೇಷ ಕೋಶದೊಂದಿಗೆ ಸದರಿ ಹುದ್ದೆಗಳನ್ನು ದಿನಾಂಕ 01–04–2009 ರಿಂದ 31–03–2010 ರವರೆಗೆ ಮುಂದುವರಿಸಲಾಗಿತ್ತು. ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಕಡತದಲ್ಲಿ ಜಲಸಂಪನ್ಮೂಲ ಇಲಾಖೆಯ ವಿಶೇಷ ಕೋಶ ಹಾಗೂ ಪೂರಕ ಹುದ್ದೆಗಳ ಅಗತ್ಯವಿರುವುದರಿಂದ ವಿಶೇಷ ಕೋಶ ಹಾಗೂ ಹುದ್ದೆಗಳನ್ನು ಮುಂದುವರಿಸುವಂತೆ ಪ್ರಸ್ತಾವಿಸಲಾಗಿದೆ.

ಕ್ರ. ಸಂ.	ಹುದ್ದೆಯ ಪದನಾಮ	ಹುದ್ದೆಗಳ ಸಂಖ್ಯೆ
1.	ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ	1 ಹುದ್ದೆ
2.	ವಿಶೇಷ ಕರ್ತವ್ಯಾಧಿಕಾರಿ (ಅಧೀನ ಕಾರ್ಯದರ್ಶಿ ಕೇಡರ್)	1 ಹುದ್ದೆ
3.	ಶಾಖಾಧಿಕಾರಿ	1 ಹುದ್ದೆ
4.	ಹಿರಿಯ ಸಹಾಯಕ	2 ಹುದ್ದೆ
5.	ಸಹಾಯಕ	1 ಹುದ್ದೆ
6.	ಶೀಘ್ರಲಿಪಿಗಾರರು	1 ಹುದ್ದೆ
7.	ಬೆರಳಚ್ಚುಗಾರರು	1 ಹುದ್ದೆ
8.	ದಲಾಯತ್	1 ಹುದ್ದೆ

ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿ ಆಪ್ತ ಶಾಖೆ ಸಿಬ್ಬಂದಿ :-

ಕ್ರ. ಸಂ.	ಹುದ್ದೆಯ ಪದನಾಮ	ಹುದ್ದೆಗಳ ಸಂಖ್ಯೆ
1.	ಶೀಘ್ರಲಿಪಿಗಾರರು	1 ಹುದ್ದೆ
2.	ಕಿರಿಯ ಸಹಾಯಕರು	1 ಹುದ್ದೆ
3.	ಗ್ರೂಪ್ – ಡಿ	1 ಹುದ್ದೆ

ಈ ಬಗ್ಗೆ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂ : ಸಿಆಸುಇ 197 ಸಅಸೇ 2009, ಬೆಂಗಳೂರು, ದಿನಾಂಕ : 22-04-2010

ಕರ್ನಾಟಕ ಸರ್ಕಾರದ ಸಚಿವಾಲಯದ ಜಲಸಂಪನ್ಮೂಲ ಇಲಾಖೆಯಲ್ಲಿ ಕೃಷ್ಣಾ ಭಾಗ್ಯ ಜಲ ನಿಗಮದ ವಿಶೇಷ ಕೋಶವನ್ನು ಹಾಗೂ ಈ ಕೆಳಕಂಡ ತಾತ್ಕಾಲಿಕ ಹುದ್ದೆಗಳೊಂದಿಗೆ ದಿನಾಂಕ 01-04-2010 ರಿಂದ ದಿನಾಂಕ 31-03-2011 ರವರೆಗೆ ಮುಂದುವರೆಸಿ ಆದೇಶಿಸಿದೆ.

ಕ್ರ. ಸಂ.	ಹುದ್ದೆಯ ಪದನಾಮ	ಹುದ್ದೆಗಳ ಸಂಖ್ಯೆ
1.	ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ	1 ಹುದ್ದೆ
2.	ವಿಶೇಷ ಕರ್ತವ್ಯಾಧಿಕಾರಿ (ಅಧೀನ ಕಾರ್ಯದರ್ಶಿ ಕೇಡರ್)	1 ಹುದ್ದೆ
3.	ಶಾಖಾಧಿಕಾರಿ	1 ಹುದ್ದೆ
4.	ಹಿರಿಯ ಸಹಾಯಕ	2 ಹುದ್ದೆ
5.	ಸಹಾಯಕ	1 ಹುದ್ದೆ
6.	ಶೀಘ್ರಲಿಪಿಗಾರರು	1 ಹುದ್ದೆ
7.	ಬೆರಳಚ್ಚುಗಾರರು	1 ಹುದ್ದೆ
8.	ದಲಾಯತ್	1 ಹುದ್ದೆ

ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿ ಆಪ್ತ ಶಾಖೆ ಸಿಬ್ಬಂದಿ :-

ಕ್ರ. ಸಂ.	ಹುದ್ದೆಯ ಪದನಾಮ	ಹುದ್ದೆಗಳ ಸಂಖ್ಯೆ
1.	ಶೀಘ್ರಲಿಪಿಗಾರರು	1 ಹುದ್ದೆ
2.	ಕಿರಿಯ ಸಹಾಯಕರು	1 ಹುದ್ದೆ
3.	ಗ್ರೂಪ್ – ಡಿ	1 ಹುದ್ದೆ

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್.ಡಿ. 1 ಟಿಎಫ್‌ಪಿ 96, ದಿನಾಂಕ 10-07-1996 ರಲ್ಲಿ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಂ.ಎಸ್. ಶಿವರಾಮ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
(ಸೇವೆಗಳು-3).

ಪಿ.ಆರ್. 1161

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ತಿದ್ದೋಲೆ

ಸಂಖ್ಯೆ : ಸಿಆಸುಇ 136 ಸಅಸೇ 2010, ಬೆಂಗಳೂರು, ದಿನಾಂಕ 29-04-2010

ಕರ್ನಾಟಕ ಸರ್ಕಾರ ಸಚಿವಾಲಯದ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಸರ್ಕಾರದ ಕಾರ್ಯದರ್ಶಿ (ಪರಿಸರ ಮತ್ತು ಜೀವಿಶಾಸ್ತ್ರ) ಹುದ್ದೆಯನ್ನು ಮುಂದುವರೆಸಿ ಹೊರಡಿಸಲಾದ ದಿನಾಂಕ 07-04-2010 ರ ಸರ್ಕಾರ ಆದೇಶ ಸಂಖ್ಯೆಯನ್ನು ಸಿಆಸುಇ 276 ಸಅಸೇ 2009 ಎಂಬುದಕ್ಕೆ ಬದಲಾಗಿ ಸಿಆಸುಇ **136 ಸಅಸೇ 2010** ಎಂದು ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಂ.ಎಸ್. ಶಿವರಾಮ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
(ಸೇವೆಗಳು-3).

ಪಿ.ಆರ್. 1162

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಕರ್ನಾಟಕ ಸರ್ಕಾರ ಸಚಿವಾಲಯದ ಆರ್ಥಿಕ ಇಲಾಖೆಯಲ್ಲಿನ ಉಪಕಾರ್ಯದರ್ಶಿ (ಎಫ್.ಆರ್. ಮತ್ತು ಬಿ.ಸಿ.ಸಿ.) ಹುದ್ದೆಯನ್ನು ಮುಂದುವರೆಸುವ ಬಗ್ಗೆ.

ಓದಲಾಗಿದೆ :

1) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 95 ಸಅಸೇ 2010 ದಿನಾಂಕ 24.02.2010.
2) ಪತ್ರ ಸಂಖ್ಯೆ ಎಫ್‌ಡಿ 41 ಸಮಯ 2010, ದಿನಾಂಕ 9-4-2010 ಸರ್ಕಾರದ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲಗಳು), ಆರ್ಥಿಕ ಇಲಾಖೆ ಇವರಿಂದ.

ಪ್ರಸ್ತಾವನೆ :

ಮೇಲೆ (1) ರಲ್ಲಿ ಓದಲಾದ ದಿನಾಂಕ 24ನೇ ಫೆಬ್ರವರಿ 2010 ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯದ ಆರ್ಥಿಕ ಇಲಾಖೆಯ ಅಧೀನ ಕಾರ್ಯದರ್ಶಿ (ಎಫ್.ಆರ್. ಮತ್ತು ಬಿ.ಸಿ.ಸಿ.) ಈ ಹುದ್ದೆಯನ್ನು ದಿನಾಂಕ 31.3.2010 ರವರೆಗೆ ತಾತ್ಕಾಲಿಕವಾಗಿ ಸರ್ಕಾರದ ಉಪ ಕಾರ್ಯದರ್ಶಿ (ಎಫ್.ಆರ್. ಮತ್ತು ಬಿ.ಸಿ.ಸಿ.) ಹುದ್ದೆಗೆ ಮೇಲ್ದರ್ಜೆಗೇರಿಸಿ ಆದೇಶ ಹೊರಡಿಸಲಾಗಿತ್ತು. ಮೇಲೆ (2) ರಲ್ಲಿ ಓದಲಾದ ದಿನಾಂಕ 9-4-2010 ರ ಪತ್ರದಲ್ಲಿ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲಗಳು), ಆರ್ಥಿಕ ಇಲಾಖೆ ಅವರು ಸದರಿ ಹುದ್ದೆಯನ್ನು ದಿನಾಂಕ 1.4.2010 ರಿಂದ ಮುಂದುವರೆಸುವಂತೆ ಕೋರಿದ್ದಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂ : ಸಿಆಸುಇ 95 ಸಅಸೇ 2010, ಬೆಂಗಳೂರು, ದಿನಾಂಕ : 24-04-2010

ಕರ್ನಾಟಕ ಸರ್ಕಾರ ಸಚಿವಾಲಯದ ಆರ್ಥಿಕ ಇಲಾಖೆಯ ಉಪ ಕಾರ್ಯದರ್ಶಿ (ಎಫ್.ಆರ್. ಮತ್ತು ಬಿ.ಸಿ.ಸಿ.) ಹುದ್ದೆಯನ್ನು ದಿನಾಂಕ 1-4-2010 ರಿಂದ ಒಂದು ವರ್ಷದವರೆಗೆ ಮುಂದುವರೆಸುತ್ತದೆ.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ 10-7-1996 ರಲ್ಲಿ ಪ್ರತ್ಯಾಯೋಜಿಸಲಾದ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಂ.ಎಸ್. ಶಿವರಾಮ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
(ಸೇವೆಗಳು-3).

ಪಿ.ಆರ್. 1163

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಜಲಸಂಪನ್ಮೂಲ ಇಲಾಖೆಯ ತಾಂತ್ರಿಕ-4 ಶಾಖೆಯಲ್ಲಿನ ವಿಶೇಷಾಧಿಕಾರಿ (ವಿಶ್ವಬ್ಯಾಂಕ್) ಹುದ್ದೆಯ ಹೆಸರನ್ನು ಮರುಪದನಾಮೀಕರಿಸುವ ಬಗ್ಗೆ.

ಓದಲಾಗಿದೆ :

1) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 556 ಸಅಸೇ 2009, ದಿನಾಂಕ 04.02.2010.
2) ಅನಧಿಕೃತ ಟಿಪ್ಪಣಿ ಸಂಖ್ಯೆ : ಜಸಂಇ 41 ವಿಬ್ಯಾಇ 2010, ದಿನಾಂಕ 09-04-2010.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಸರ್ಕಾರದ ಆದೇಶದಲ್ಲಿ ಜಲಸಂಪನ್ಮೂಲ ಇಲಾಖೆಯ ವಿಶ್ವಬ್ಯಾಂಕ್ ಯೋಜನೆಗಳು ಶಾಖೆಯನ್ನು ತಾಂತ್ರಿಕ-4 ಶಾಖೆ ಎಂದು ಮರುಪದನಾಮೀಕರಿಸಲಾಗಿದೆ. ಮೇಲೆ ಕ್ರಮ ಸಂಖ್ಯೆ (2) ರ ಅನಧಿಕೃತ ಟಿಪ್ಪಣಿಯಲ್ಲಿ ಜಲಸಂಪನ್ಮೂಲ ಇಲಾಖೆಯ ವಿಶೇಷಾಧಿಕಾರಿ (ವಿಶ್ವಬ್ಯಾಂಕ್) ಹುದ್ದೆಯಿದ್ದು ಮತ್ತು ವಿಶ್ವಬ್ಯಾಂಕ್ ಶಾಖೆಯ

ಹೆಸರು ತಾಂತ್ರಿಕ-4 ಎಂದು ಮರುಪದನಾಮೀಕರಿಸಿರುವುದರಿಂದ, ಈಗ ಗೊಂದಲಕ್ಕೆ ಕಾರಣವಾಗುವ ಹಿನ್ನೆಲೆಯಲ್ಲಿ ಈ ಶಾಖೆಯಲ್ಲಿನ ವಿಶೇಷಾಧಿಕಾರಿ (ವಿಶ್ವಬ್ಯಾಂಕ್) ಹುದ್ದೆಯಿದ್ದು ಸಹಾ ವಿಶೇಷಾಧಿಕಾರಿ (ತಾಂತ್ರಿಕ-4) ಎಂದು ಬದಲಾಯಿಸುವಂತೆ ಜಲಸಂಪನ್ಮೂಲ ಇಲಾಖೆಯು ಕೋರಿದೆ.

ಸರ್ಕಾರದ ಆದೇಶ ಸಂ : ಸಿಆಸುಇ 190 ಸಅಸೇ 2010, ಬೆಂಗಳೂರು, ದಿನಾಂಕ : 24-04-2010

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಜಲಸಂಪನ್ಮೂಲ ಇಲಾಖೆಯ **"ವಿಶೇಷಾಧಿಕಾರಿ (ವಿಶ್ವಬ್ಯಾಂಕ್)"** ಹುದ್ದೆಯ ಪದನಾಮವನ್ನು ತಕ್ಷಣದಿಂದ ಜಾರಿಗೆ ಬರುವಂತೆ "ವಿಶೇಷಾಧಿಕಾರಿ (ತಾಂತ್ರಿಕ-4)" ಎಂದು ಮರುಪದನಾಮೀಕರಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಂ.ಎಸ್. ಶಿವರಾಮ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ. (ಸೇವೆಗಳು-3).

ಪಿ.ಆರ್. 1164

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ (ಜನಸ್ಪಂದನ ಕೋಶ) ಹಾಗೂ ಪೂರಕ ಸಿಬ್ಬಂದಿ ಹುದ್ದೆಗಳನ್ನು ಮುಂದುವರಿಸುವ ಬಗ್ಗೆ.

ಓದಲಾಗಿದೆ :

1) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 51 ಸಸಿವಿ 03, ದಿನಾಂಕ 17.06.2003.
2) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 51 ಸಸಿವಿ 03, ದಿನಾಂಕ 23.12.2003.
3) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 24 ಸಸಿವಿ 06, ದಿನಾಂಕ 20.03.2006.
4) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 30 ಸಸಿವಿ 07, ದಿನಾಂಕ 21.05.2007.
5) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 543 ಸಅಸೇ 2007, ದಿನಾಂಕ 11.06.2008.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸುಇ (ಜನಸ್ಪಂದನ) ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಡಿಪಿಎಆರ್/ಪಿಎಸ್/ಜೆಎಸ್/69/2010 ದಿನಾಂಕ 29-03-2010.

ಪ್ರಸ್ತಾವನೆ :

ಮೇಲೆ (1) ಮತ್ತು (2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಪ್ರಧಾನ ಕಾರ್ಯದರ್ಶಿ (ಸಾರ್ವಜನಿಕ ದೂರುಗಳು) ಹುದ್ದೆಯನ್ನು ಹಾಗೂ ಪೂರಕ ಸಿಬ್ಬಂದಿ ಹುದ್ದೆಗಳೊಂದಿಗೆ ಎರಡು ವರ್ಷಗಳ ಅವಧಿಗೆ ಸೃಜಿಸಲಾಗಿದ್ದು ಹಾಗೂ ಕಾಲಕಾಲಕ್ಕೆ ಈ ಹುದ್ದೆಗಳನ್ನು ಮುಂದುವರಿಸಿ, ಮೇಲೆ ಕ್ರಮಸಂಖ್ಯೆ (5) ರಲ್ಲಿ ಓದಲಾದ ಆದೇಶದಲ್ಲಿ ಈ ಹುದ್ದೆಗಳನ್ನು ದಿನಾಂಕ : 26-05-2008 ರಿಂದ 2 ವರ್ಷದ ಅವಧಿಗೆ ಮುಂದುವರಿಸಲಾಗಿದೆ.

ಮೇಲೆ (6) ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಪ್ರಧಾನ ಕಾರ್ಯದರ್ಶಿ (ಜನಸ್ಪಂದನ) ಹಾಗೂ ಪೂರಕ ಹುದ್ದೆಗಳನ್ನು ಖಾಯಂಗೊಳಿಸುವಂತೆ ಕೋರಲಾಗಿದೆ. ಹುದ್ದೆಗಳನ್ನು ಖಾಯಂಗೊಳಿಸಲು ಆರ್ಥಿಕ ಇಲಾಖೆಯ ಸಹಮತಿ ಪಡೆದು ಕ್ರಮಕೈಗೊಳ್ಳಬೇಕಾಗಿದೆ. ಆದ್ದರಿಂದ ಈ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂ : ಸಿಆಸುಇ 212 ಸಅಸೇ 2010, ಬೆಂಗಳೂರು, ದಿನಾಂಕ : 26-04-2010

ಕರ್ನಾಟಕ ಸರ್ಕಾರದ ಸಚಿವಾಲಯದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಪ್ರಧಾನ ಕಾರ್ಯದರ್ಶಿ (ಜನಸ್ಪಂದನ ಕೋಶ) ಹುದ್ದೆ ಹಾಗೂ ಈ ಕೆಳಕಂಡ ಪೂರಕ ಸಿಬ್ಬಂದಿ ಹುದ್ದೆಗಳೊಂದಿಗೆ ದಿನಾಂಕ 26-05-2010 ರಿಂದ ಒಂದು ವರ್ಷದವರೆಗೆ ತಾತ್ಕಾಲಿಕವಾಗಿ ಮುಂದುವರಿಸಿ ಆದೇಶಿಸಿದೆ.

ಕ್ರ. ಸಂ.	ಹುದ್ದೆಯ ಪದನಾಮ	ಹುದ್ದೆಗಳ ಸಂಖ್ಯೆ
1.	ಆಪ್ತ ಕಾರ್ಯದರ್ಶಿ ಗ್ರೇಡ್-2/ಪತ್ರಾಂಕಿತ ಆಪ್ತ ಸಹಾಯಕ	1 ಹುದ್ದೆ
2.	ಪತ್ರಾಂಕಿತ ಆಪ್ತ ಸಹಾಯಕ/ಹಿರಿಯ ಶೀಘ್ರಲಿಪಿಗಾರ	1 ಹುದ್ದೆ

3.	ಶಾಖಾಧಿಕಾರಿ/ಹಿರಿಯ ಸಹಾಯಕ	1 ಹುದ್ದೆ
4.	ಶೀಘ್ರಲಿಪಿಗಾರರು	1 ಹುದ್ದೆ
5.	ಕಿರಿಯ ಸಹಾಯಕ	1 ಹುದ್ದೆ
6.	ದಲಾಯತ್	2 ಹುದ್ದೆಗಳು
7.	ವಾಹನ ಚಾಲಕ	1 ಹುದ್ದೆ

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್.ಡಿ. 1 ಟಿಎಫ್‌ಪಿ 96, ದಿನಾಂಕ 10–07–1996 ರಲ್ಲಿ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಂ.ಎಸ್. ಶಿವರಾಮ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ. (ಸೇವೆಗಳು–3).

ಪಿ.ಆರ್. 1165

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬಿಜಾಪುರ ಜಿಲ್ಲೆ ಮುದ್ದೇಬಿಹಾಳ ತಾಲ್ಲೂಕು ಬಳಗಾನೂರು ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ, ಇವರ ದಿನಾಂಕ : 15/12/2009ರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2009–10/7454.

ಪ್ರಸ್ತಾವನೆ :

ಮೇಲೆ ಓದಲಾದ ಪತ್ರದಲ್ಲಿ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ, ಇವರು ಬಿಜಾಪುರ ಜಿಲ್ಲೆ, ಮುದ್ದೇಬಿಹಾಳ ತಾಲ್ಲೂಕು ಬಳಗಾನೂರು ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಬಳಗಾನೂರು ಗ್ರಾಮದ ಜಮೀನುಗಳಿಗೆ ನ್ಯಾಯಾಲಯವು ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ರೂ.74,03,091–00 ಗಳ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ :

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1) ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ : 30–01–1997
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 04–12–1991

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1) ರಡಿ ಮುದ್ದೇಬಿಹಾಳ ಸಿವಿಲ್ ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣಗಳನ್ನು ದಾಖಲಿಸಿದ್ದು, ಈ ಪ್ರಕರಣಗಳಲ್ಲಿ ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯು ಪತ್ರ ಸಂಖ್ಯೆ : ಆರ್‌ಡಿ : 980 ಎಲ್‌ಸಿಬಿ 2009 ದಿನಾಂಕ 07–05–2009 ರಲ್ಲಿ ಅಭಿಪ್ರಾಯ ನೀಡಿದೆ.

ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿರುವ ಪ್ರಕರಣದ ವಿವರ ಕೆಳಕಂಡಂತಿದೆ :

ಕ್ರ. ಸಂ.	ಎಲ್‌ಎಸಿ ಪ್ರಕರಣ ಸಂ.	ಬಳಗಾನೂರು ಗ್ರಾಮದ ಸ.ನಂ.	ವಿಸ್ತೀರ್ಣ ಎ–ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	91/01	279/2ಅ	0–22	346904
2	92/01	279/2ಬ	0–30	472934

3	93/01	278/2	5–09	2287853
4	95/01	282/1ಬ/2	4–00	1751539
5	96/01	282/1ಬ/ಎ	3–26	1598310
6	105/01	279/2ಕ	1–20	945551
		ಒಟ್ಟು		**7403091**

- ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯವು ವೆಚ್ಚ ಸಹ ಸೇರಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂ : ಸನೀಇ 10 ಭೂಸ್ವಾಪ್ರ 2010, ಬೆಂಗಳೂರು, ದಿನಾಂಕ : 29–04–2010

ಬಿಜಾಪುರ ಜಿಲ್ಲೆ ಮುದ್ದೇಬಿಹಾಳ ತಾಲ್ಲೂಕು ಬಳಗಾನೂರ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಬಳಗಾನೂರ ಗ್ರಾಮಕ್ಕೆ ಸೇರಿದ ಮೇಲ್ಕಂಡ ಸರ್ವೆ ನಂಬರ್‌ನ ಜಮೀನುಗಳಿಗೆ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಹಾಕಿದ ಪರಿಹಾರ ಧನ ಮೊತ್ತ ರೂ.74,03,091–00 ಗಳನ್ನು (ಎಪ್ಪತ್ತನಾಲ್ಕು ಲಕ್ಷದ ಮೂರು ಸಾವಿರದ ತ್ತೊಂಬತ್ತೊಂದು ರೂಪಾಯಿಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2010–11ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್.ಡಿ. 1 ಟಿಎಫ್‌ಪಿ 2008, ದಿನಾಂಕ 16–05–2008 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಕೆ. ಸುಧಾಕರ ಶೆಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಪಿ.ಆರ್. 1166

ಜಲಸಂಪನ್ಮೂಲ ಸಚಿವಾಲಯ

ತಿದ್ದುಪಡಿ

ಸಂಖ್ಯೆ : ಸನೀಇ 10 ಅಪಿಬಂ 2009, ಬೆಂಗಳೂರು, ದಿನಾಂಕ 30–04–2010.

ದಿನಾಂಕ 13–04–09 ರಂದು ಹೊರಡಿಸಲಾಗಿರುವ ಆದೇಶ ಸಂಖ್ಯೆ : ಸನೀಇ 10 ಅಪಿಬಂ 2009 ರಲ್ಲಿ ವಿಷಯ ಪ್ರಸ್ತಾವನೆ ಹಾಗೂ ಆದೇಶ ಭಾಗದಲ್ಲಿ **"ಮುದ್ದೇಬಿಹಾಳ ತಾಲ್ಲೂಕು"** ಎಂಬುದರ ಬದಲಾಗಿ **"ಸಿಂಧಗಿ ತಾಲ್ಲೂಕು"** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಕೆ. ಸುಧಾಕರ ಶೆಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಪಿ.ಆರ್. 1167

FOREST, ECOLOGY AND ENVIRONMENT SECRETARIAT

Sub : Implementation of the Scheduled Tribes and Other Traditional Forest Dwellers (Recognition of Forest Rights) Act 2006 & Rules 2008 - - Process of verifying the claims by Forest Rights Committee.

Read : 1. Proceedings of the meeting held on 28-02-2010 in the chamber of the Chief Secretary to Government of Karnataka with regard to the implementation of the Scheduled Tribes and Other Traditional Forest Dwellers (Recognition of Forest Rights) Act 2006 & Rules 2008.

2. Proceedings of the meeting held on 13-01-2010 and 30-03-2010 under the chairpersonship of Principal Secretary to Government, Forest, Ecology and Environment with regard to the implementation of the Scheduled Tribes and Other Traditional Forest Dwellers (Recognition of Forest Rights) Act 2006 & Rules 2008.

3. Government Order No. SWD 19 PAVAYO 2008 (P), dated : 02-04-2008.

Preamble:

Government of India had notified the Scheduled Tribes and Other Traditional Forest Dwellers (Recognition of Forest Rights) Act, 2006 along with the Rules, 2008 so as to recognize the rights traditionally enjoyed by the forest dwelling Scheduled Tribes, who are occupying the forest lands before 13th day of December, 2005 and Other Traditional Forest dwellers who are occumnpying the forest land for three generations (One generation is equal to 25 years) before the 13th day of December, 2005.

2. As provided under Rule 12 "Process of verifying claims by Forest Rights Committee and sub-rule (1) of the said rules the Forest Rights Committee shall, after due intimation to the concerned claimant and the Karnataka Forest Department, visit the site and Physically verify the nature and extent of the claim and evidences on the site, receive any further evidences etc., In this context, it is appropriate and essential to notify the official to represent the Karnataka Forest Department for the purpose of this Rule.

3. Hence the following Order :

GOVERNMENT ORDER NO. FEE 149 FWL 2008, BANGALORE, DATED 29-04-2010

In the circumstances explained in the preamble, the Government is hereby appoints the jurisdictional Range Forest Officers to represent Karnataka Forest Department for the purpose of Rule 12(1) of Scheduled Tribes and Other Traditional Forest Dwellers (Recognition of Forest Rights) Rules, 2008.

By Order and in the name of the Governor of Karnataka,
(P.R. KALAVATHI),
Under Secretary to Government,
Forest, Ecology & Environment Department.

P.R.No. 1168

FOREST, ECOLOGY AND ENVIRONMENT SECRETARIAT

Sub : Implementation of the Scheduled Tribes and Other Traditional Forest Dwellers (Recognition of Forest Rights) Act 2006 & Rules 2008 - - Process of verifying the claims by Forest Rights Committee.

Read : 1. Proceedings of the meeting held on 28-02-2010 in the chamber of the Chief Secretary to Government of Karnataka with regard to the implementation of the Scheduled Tribes and Other Traditional Forest Dwellers (Recognition of Forest Rights) Act 2006 & Rules 2008.

2. Proceedings of the meetings held on 13-01-2010 and 30-03-2010 under the chairpersonship of Principal Secretary to Government, Forest, Ecology and Environment with regard to the implementation of the Scheduled Tribes and Other Traditional Forest Dwellers (Recognition of Forest Rights) Act, 2006 & Rules 2008.

3. Direction from the Secretary to Government, Social Welfare Department to the Deputy Commissioners vide his D.O. letter No. SWD 20 PAVAYO 2009, dated : 18-01-2010.

4. Government Order No. FEE 149 FWL 2008, Dt : 29-04-2010.
5. Orders No. SWD 19 PAVAYO 2008 (P), Bangalore, dated : 02-04-2008.

Preamble:

Government of India had notified the Scheduled Tribes and Other Traditional Forest Dwellers (Recognition of Forest Rights) Act, 2006 along with the Rules, 2008 so as to recognize the rights over the land to the forest dwelling scheduled tribes, who are occupying the forest land before 13th day of December, 2005 and Other Traditional Forest dwellers who are occupying the forest land for three generations (One generation is equal to 25 years) before the 13th day of December, 2005.

2. As provided under Rule 12 "Process of verifying claims by Forest Rights Committee and sub-rule (1)(e), the Forest Rights Committee shall, after due intimation to the concerned claimant and the Forest Department, prepare a map delineating the area of each claim indicating recognizable landmarks. In the light of the proceedings of the meeting chaired by Chief Secretary to Government read at (1) above and the directions issued by the Secretary to Government, Social Welfare Department to the Deputy Commissioners read at (3) above, the process of preparing a map delineating the area of each claim indicating recognizable landmarks needs to be defined.

3. It is essential to notify the process of preparation of the map of each claim in order to ensure uniformity in preparation of map ascertain the correctness of claim and help the Gram Sabha, Sub Divisional and District Level Committee to arrive at a correct decision with regard to the said claim.

4. Hence the following Order :

GOVERNMENT ORDER NO. FEE 149 FWL 2008, BANGALORE, DATED 29-04-2010

In the circumstances explained in the preamble and as provided under Sub-Rule (1)(e) of Rule 12 of the Scheduled Tribes and Other Traditional Forest Dweller (Recognition of Forest Rights) Act, 2006 & Rules, 2008, the Government is here by ordered to follow the following instructions/directions while processing to verify the claims by Forest Rights Committees ;

1. The survey in order to prepare map delineating the area of each claim, as per the directions of the Deputy Commissioner, shall be carried out in the presence of the jurisdictional Range Forest Officer / Forester.
2. The jurisdictional Range Forest Officer/Forester shall record on the map of each claim and coordinates (Latitude and Longitude in Indo Bangladesh datum) using a GPS, of each of the corner points of the surveyed area.
3. The map of each claim shall be attested among others, by the jurisdictional Range Forest Officer and the Jurisdictional Forester.
4. In order to ascertain the correctness of the claim and the map so generated, the Sub Divisional Committee may use the tools of geo informatics.

By Order and in the name of the Governor of Karnataka,
(P.R. KALAVATHI),
Under Secretary to Government,
Forest, Ecology & Environment Department.

P.R.No. 1169

FOREST, ECOLOGY & ENVIRONMENT SECRETARIAT

Sub : Diversion of 74.86 ha. of forest land for the purpose of mining at Sy.No.1 of Kudrekanive Kaval Village of Kudrekanive Reserve Forest of Hosadurga Range, Chitradurga District in favour of Sri. M.Srinivasalu, Bellary, Karnataka.

Read : 1) Letter No. A5 (1) MNG.CR.9/07-08, dated : 06-02-2008 of the Principal Chief Conservator of Forests, Bangalore.

2) State Government letter No. FEE 18 FFM 2008, dated : 03-04-2008.

3) Government of India Ministry of Environment and Forests, New Delhi letter No. F.No. 8-27/2008-FC, dated 22-10-2008.

4) Letter No. A5 (1) MNG.CR.9/07-08, dated 13-03-2009 of the Principal Chief Conservator of Forests, Bangalore.

5) State Government letter No. FEE 18 FFM 2008, dated 15-12-2009.

6) Government of India Ministry of Environment and Forests, New Delhi letter No. F.No. 8-27/2008-FC, dated 31-03-2010.

Preamble:

The Principal Chief Conservator of Forests had sent proposal vide in his letter dated : 06-02-2008 read at (1) above for diversion of 74.86 ha. of forest land for the purpose of mining at Sy.No.1 of Kudrekanive Kaval Village of Kudrekanive Reserve Forest of Hosadurga Range, Chitradurga District in favour of Sri. M.Srinivasalu, Bellary subject to certain conditions.

The proposal of the Principal Chief Conservator of Forests was recommended to Government of India, Ministry of Environment and Forests, New Delhi vide State Government letter dated : 03-04-2008 read at (2) above seeking prior approval of Government of India under Section 2 of The Forest (Conservation) Act, 1980.

After careful consideration of the proposal of the State Government, Government of India vide its letter dated : 22-10-2008 read at (3) above has agreed in-principle (Stage-I) subject to the fulfillment of certain conditions.

In compliance of the conditions stipulated by Government of India vide its letter dated : 22-10-2008 the Principal Chief Conservator of Forests vide in his letter dated : 13-03-2009 read at (4) above has sent his compliance report. This compliance report was forwarded to Government of India vide State Government letter dated : 15-12-2009 read at (5) above.

Government of India vide its letter dated 31-03-2010 read at (6) above has conveyed its final approval (Stage-II) under Section 2 of the Forest (Conservation) Act, 1980 for diversion 74.86 ha. of forest land for the purpose of mining at Sy.No. 1 of Kudrekanive Kaval Village of Kudrekanive Reserve Forest of Hosadurga Range, Chitradurga District in favour of Sri. M.Srinivasalu, Bellary subject to certain conditions.

Hence the Order.

GOVERNMENT ORDER NO. FEE 18 FFM 2008, BANGALORE, DATED 24-04-2010

In the circumstances explained above, Government is pleased to accord sanction under Section 2 of the Forest (Conservation) Act, 1980 for diversion of 74.86 ha. of forest land for the purpose of mining at Sy.No. 1 of Kudrekanive Kaval Village of Kudrekanive Reserve Forest of Hosadurga Range, Chitradurga District in favour of Sri. M.Srinivasalu, Bellary subject to the following conditions.

1. Legal status of forest land shall remain unchanged.
2. Compensatory afforestation shall be raised and maintained by the State Forest Department at the project cost on equivalent non-forest land as envisaged.
3. Wherever possible and technically feasible, the User Agency shall undertake afforestation measures in the blanks within the lease area, as well as along the roads outside the lease area diverted under this approval, in consultation with the State Forest Department at the project cost.
4. De-silting of the village tanks falling within 5 Kms radius from the lease boundary shall be taken up by the user agency at regular intervals.
5. Following activities shall be undertaken by the User Agency at the project cost :
   - (i) Proper mitigative measures to minimize soil erosion and choking of streams shall be prepared and implemented.
   - (ii) Planting of adequate drought hardy plant species and sowing of seeds to arrest soil erosion.
   - (iii) Construction of check dams, retention/toe walls to arrest sliding down of the excavated material along the contour along all the decks of the overburdens.

(iv) The areas shall be reclaimed keeping in view the international practice of stabilizing the dumps by grading/benching so that angles of repose (normally less than 28° at given place) are maintained.

(v) The top soil management plan should be strictly adhered to.

6. Any tree felling shall be done only when it is absolutely necessary and unavoidable, and that too under strict supervision of the State Forest Department. The non-forest land proposed for Compensatory Afforestation should be transferred and mutated in the name of Forest Department and should be declared as Reserved Forests/Protected forests within six months.
7. The period of permission for lease under the Forest (Conservation) Act, 1980 will be for 20 years subject to and co-terminus with possession of valid lease by User Agency under the MMDR Act, 1957.
8. No damage to the flora and fauna of the area shall be caused.
9. It shall be ensured that no labour-camps are set up inside the forest area.
10. The lease area shall be demarcated on ground at the project cost.
11. The forest land shall not be used for any purpose other than that specified in the proposal.
12. The mitigative measures suggested by the State Wildlife Department and Forest Department shall be implemented at user agency's cost.
13. The User Agency shall implement the approved plan for Resettlement and Rehabilitation of the project affected families at the Project Cost. The implementation of the R & R plan shall be periodically monitored by the Regional Office, Ministry of Environment and Forests, Bangalore and a report thereon shall be submitted periodically.
14. All other conditions stipulated by the State Government of Karnataka at the time of submission of the project proposal to the Central Government, shall be complied with by the User Agency.
15. Any other condition that the CCF (Central) ; Regional Office, Bangalore ; may impose from time to time for the protection and improvement of flora and fauna in the forest area.
16. All other conditions under different rules, regulations and guidelines including environmental clearance and the Scheduled Tribes and other Traditional Forest Dwellers (Recognition of Forest Rights) Act, 2006 shall be complied with before transfer of forest land.
17. The lessee shall pay usual lease rent and other charges as prescribed by the Govt. from time to time.
18. The lessee shall open a firewood depot to supply firewood to the employees and labourers at the subsidized rates and the quantity to be prescribed by the Deputy Conservator of Forests concerned.
19. The lessee shall carryout soil and water conservation measures and other necessary measures as advised by the Forest Department from time to time.
20. The lessee shall undertake to protect rigidly the leased area and forest area surrounding the area up to one Km. from the leased area.
21. The lessee shall not cut any trees without prior permission of the Forest Department and all produce of permitted felling shall be handed over to Forest Department under cover of receipt.
22. The lessee shall abide by all the conditions prescribed by Govt. of India and Govt. of Karnataka.
23. The lessee shall execute an agreement with the Forest Dept. binding himself to abide by all usual conditions and terms as per orders of the Govt. as well as Principal Chief Conservator of Forests.
24. The lessee shall take-up the planting work on the static dumps during the advance mining operations.

25. In case of violation of agreement conditions, the State Government (Department of Forests, Ecology and Environment) shall have right to suspend the mining activities.
26. The lessee shall reclaim the area 74.86 ha before handing over to Forest Department.
27. Lessee has to pay extraction cost to Forest Department for felling of trees in the mining leased area.
28. The lessee has to pay all the dues against him before the end of lease period including reclamation and rehabilitation charges.
29. The user agency shall submit the reclamation and rehabilitation plan after in principal approval, if not submitted so with a undertaking that amount fixed by Forest Department/Director, Dept. of Mines and Geology/IBM shall be deposited to Forest Department on demand Review for rehabilitation and reclamation will be carried out on 5th, 10th, 15th, and 19th year and if found unsatisfactory then the permission granted under Forest (Conservation) Act 1980 will be revoked by the Government of Karnataka.
30. The lessee has to pay the cost of compensatory afforestation charges, Net Present Value, cost of safety zone, reclamation and land lease rent as per rules in force and Compensatory Afforestation Charges as per revised Government Order vide No.FEE 242 FAP 09, dated : 08-01-2010.
31. Any other condition that the State Government or the Chief Conservator of Forests (Central), Regional Office, Bangalore may impose from time to time in the interest of conservation, protection and development of forests.

By Order and in the name of the Governor of Karnataka,
(H.M. MALLIKARJUNA SWAMY)
Under Secretary to Government,
Forest, Ecology & Environment Department.

P.R.No. 1170

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಗುಲ್ಬರ್ಗಾ ನಗರದಲ್ಲಿ ಶರಣ ಬಸವೇಶ್ವರ ಅನುಭವ ಮಂಟಪ ನಿರ್ಮಿಸುವ ಬಗ್ಗೆ.

ಉಲ್ಲೇಖ : 1) ಸಚಿವ ಸಂಪುಟದ ನಿರ್ಣಯ ಸಂಖ್ಯೆ 423/2009, ದಿನಾಂಕ 26-08-2009

2) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ : ಕಸನಿ 11 ಸ.ಭ. 2009-10, ದಿನಾಂಕ 8-10-2009.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ 26-08-2009ರ ಸಚಿವ ಸಂಪುಟ ನಿರ್ಣಯದಲ್ಲಿ ಗುಲ್ಬರ್ಗಾ ನಗರದಲ್ಲಿ ಶ್ರೀ ಶರಣ ಬಸವೇಶ್ವರ ಅನುಭವ ಮಂಟಪ ನಿರ್ಮಿಸಲು ಉದ್ದೇಶಿಸಿದ್ದು, ಅದಕ್ಕೆ 2010-11ನೇ ಸಾಲಿಗೆ ರೂ. 1.00 ಕೋಟಿ ಧನ ಸಹಾಯ ನೀಡಲು ಸಚಿವ ಸಂಪುಟವು ನಿರ್ಧರಿಸಿದೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ 08-10-2009ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಗುಲ್ಬರ್ಗಾ ನಗರದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಶರಣ ಬಸವೇಶ್ವರ ಅನುಭವ ಮಂಟಪಕ್ಕೆ ರೂ. 100.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಗುಲ್ಬರ್ಗಾ ಜಿಲ್ಲೆ ಇವರಿಗೆ ಬಿಡುಗಡೆ ಮಾಡಿ ಆದೇಶ ಹೊರಡಿಸಲು ವಿನಂತಿಸಿರುತ್ತಾರೆ. ಈ ವೆಚ್ಚವನ್ನು ಲೆಕ್ಕಶೀರ್ಷಿಕೆ 2205-00-102-4-31-059 (ಯೋಜನೆ) ಹೊಸ ಜಿಲ್ಲೆಗಳಲ್ಲಿ ರಂಗಮಂದಿರ ನಿರ್ಮಾಣ ಶೀರ್ಷಿಕೆಯಡಿ ಹೆಚ್ಚುವರಿಯಾಗಿ ಒದಗಿಸಿಕೊಂಡು ರೂ. 100.00 ಲಕ್ಷಗಳ ಅನುದಾನವನ್ನು ಭರಿಸಬಹುದಾಗಿದೆ ಎಂದು ತಿಳಿಸಿರುತ್ತಾರೆ.

ಗುಲ್ಬರ್ಗಾ ನಗರದಲ್ಲಿ ಶರಣ ಬಸವೇಶ್ವರ ಅನುಭವ ಮಂಟಪ ನಿರ್ಮಿಸಲು ರೂ. 100.00 ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿರುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 69 ಸ್ಮಾಪ್ರನಿ 2009, ಬೆಂಗಳೂರು, ದಿನಾಂಕ: 3ನೇ ಮೇ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಗುಲ್ಬರ್ಗಾ ನಗರದಲ್ಲಿ ಶರಣ ಬಸವೇಶ್ವರ ಅನುಭವ ಮಂಟಪ ನಿರ್ಮಿಸಲು ಈ ಕೆಳಕಂಡ ಷರತ್ತುಗಳನ್ನು ವಿಧಿಸಿ, ಸರ್ಕಾರದಿಂದ ರೂ. 100.00 (ರೂಪಾಯಿ ನೂರು ಲಕ್ಷಗಳು ಮಾತ್ರ) ಲಕ್ಷಗಳ ಅನುದಾನವನ್ನು ಜಿಲ್ಲಾಧಿಕಾರಿಗಳು, ಗುಲ್ಬರ್ಗಾ ಜಿಲ್ಲೆ, ಗುಲ್ಬರ್ಗಾ ಇವರಿಗೆ ಬಿಡುಗಡೆ ಮಾಡಿದೆ.

ಷರತ್ತುಗಳು :

1) ಕಾಮಗಾರಿಯ ಅಂದಾಜು ಪಟ್ಟಿಗೆ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆಯನ್ನು ಪಡೆದು ಕಾಮಗಾರಿ ಕೈಗೊಳ್ಳುವುದು.
2) ಕಾಮಗಾರಿಯನ್ನು ಟೆಂಡರ್ ಕರೆದು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ಅದರ ನಿಯಮಗಳು 2000ನ್ನು ಅನುಸರಿಸುವುದು.
3) ಕಾಮಗಾರಿಯನ್ನು ಜಿಲ್ಲಾಧಿಕಾರಿಗಳು, ಗುಲ್ಬರ್ಗಾ ಜಿಲ್ಲೆ ಇವರ ಮೇಲುಸ್ತುವಾರಿಯಲ್ಲಿ ಕೈಗೊಳ್ಳುವುದು.

ಈ ಅನುದಾನವನ್ನು 2010-11ನೇ ಸಾಲಿನ ಲೆಕ್ಕ ಶೀರ್ಷಿಕೆ 2205-00-102-4-31-059 (ಕನ್ನಡ ಮತ್ತು ಸಂಸ್ಕೃತಿಗೆ ಉತ್ಸಾಹ) ಇದರಡಿ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ 08-04-2010ರ ಟಿಪ್ಪಣಿ ಸಂಖ್ಯೆ ಆಇ 212 ವೆಚ್ಚ-7/2010 ರಲ್ಲಿ ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ. ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1202 ಕನ್ನಡ ಮತ್ತು ಸಂಸ್ಕೃತಿ,

ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ಇಂಧನ ಸಚಿವಾಲಯ

ವಿಷಯ : ಮೆ॥ ಕಪಿಲ ಮಂಜುಶ್ರೀ ಇವರಿಗೆ 4.00 ಮೆಗಾವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ : 1) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ : ಕೆಆರ್ಇಡಿ/06/ಕೋಟೆ ಮಲೆ ಎಂ.ಹೆಚ್.ಎಸ್/09/2396 ದಿನಾಂಕ 3/4-8-2009 ಮತ್ತು ಸಂಖ್ಯೆ : ಕೆಆರ್ಇಡಿ/06/ಕೋಟೆಮಲೆ ಕಿ.ಜ.ವಿ/2010/822 ದಿನಾಂಕ : 22/24-03-2010.

2) ದಿನಾಂಕ 26-03-2010 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು Director, M/s Yeses Retail Ventures Private Limited ಇವರ ಪತ್ರ ದಿನಾಂಕ 26-04-2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರಗಳಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s Yeses Retail Ventures Private Limited ಇವರಿಗೆ ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ತಣ್ಣಿಮನಿ ಗ್ರಾಮದ ಬಳಿ ಭಾಗಮಂಡಲ ಪಟ್ಟಣದ ಕೋಟೆಮಲೆ ಎಸ್ಟೇಟ್‌ನ ಮುಖಾಂತರ ಹರಿಯುವ 3 ತೊರೆಗಳಿಗೆ ಅಡ್ಡಲಾಗಿ 4.00 ಮೆಗಾವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ನಡವಳಿಯ ಪ್ರಕಾರ ದಿನಾಂಕ 26-03-2010 ರಂದು ಜರುಗಿದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. M/s Yeses Retail Ventures Private Limited ಇವರಿಗೆ 4.00 ಮೆಗಾವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಹಂಚಿಕೆ ಸಮಿತಿಯು ಪರಿಗಣಿಸಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ನಿರ್ದೇಶಕರು M/s Yeses Retail Ventures Private Limited ಇವರು ಉದ್ದೇಶಿತ ಯೋಜನೆಯ ಜಮೀನು ಕಪಿಲ ಮಂಜುಶ್ರೀ ಹೆಸರಿನಲ್ಲಿ ಇರುವುದರಿಂದ ಈ ಯೋಜನೆಯನ್ನು ಮೆ॥ ಕಪಿಲ ಮಂಜುಶ್ರೀ ಇವರ ಹೆಸರಿನಲ್ಲಿ ಹಂಚಿಕೆ ಮಾಡಬೇಕೆಂದು ಕೋರಿರುತ್ತಾರೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ.

ಸರ್ಕಾರಿ ಆದೇಶ ಸಂಖ್ಯೆ: ಇಎನ್ 453 ಎನ್‌ಸಿಇ 2009, ಬೆಂಗಳೂರು, ದಿನಾಂಕ: 30-04-2010

ಮೆ॥ ಕಪಿಲ ಮಂಜುಶ್ರೀ ಇವರಿಗೆ ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ತಣ್ಣಿಮನಿ ಗ್ರಾಮದ ಬಳಿ ಭಾಗಮಂಡಲ ಪಟ್ಟಣದ ಕೋಟೆಮಲೆ ಎಸ್ಟೇಟಿನ ಮುಖಾಂತರ ಹರಿಯುವ 3 ತೊರೆಗಳಿಗೆ ಅಡ್ಡಲಾಗಿ 4.00 ಮೆಗಾವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು (Weir-1 Latitude : 12°24'58" Longitude : 75°29'24" Weir-2 Latitude : 12°24'58" Longitude : 75°28'47" Weir-3 Latitude : 12°24'52" Longitude : 75°28'28" Power House Latitude 12°25'47" Longitude : 75°27'09") ಈ ಕೆಳಗಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಲಾಗಿದೆ :-

1(ಅ) ಸದರಿ ಯೋಜನೆಯಿಂದ ಕೆಳತೊರೆ ಮತ್ತು ಮೇಲ್ತೊರೆ ಯೋಜನೆಗಳಿಗೆ ಯಾವುದೇ ಹಾನಿಯಾಗಬಾರದು.

(ಆ) ಹಂಚಿಕೆದಾರರು ಈ ಆದೇಶ ಹೊರಡಿಸಿದ 45 ದಿನಗಳ ಒಳಗಾಗಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆ ತಂತಾನೇ ರದ್ದಾಗುವುದು. ನಂತರ, ಕಂಪನಿಯು ಹಂಚಿಕೆಗೋಸ್ಕರ ಪುನಃ ಹೊಸದಾಗಿ ಅರ್ಜಿ ಸಲ್ಲಿಸತಕ್ಕದ್ದು. ಯಾವ ಕಾರಣಕ್ಕೂ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ಸ್ವೀಕರಿಸಿದ ಅರ್ಜಿ ಪರಿಷ್ಕರಣಾ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ.

(ಇ) ಒಡಂಬಡಿಕೆಯನ್ನು ರೂ. 400.00ರ ಛಾಪಾ ಕಾಗದದ ಮೇಲೆ ಮಾಡಿಕೊಂಡು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದವರಿಗೆ ಕಳುಹಿಸಿ ಪ್ರಮಾಣೀಕರಿಸಿ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು.

(ಈ) ಈ ಒಡಂಬಡಿಕೆಯನ್ನು ಮಾಡಿಕೊಳ್ಳುವ ಮೊದಲು ಯೋಜನಾ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ವಿವರವಾದ ಯೋಜನಾ ವರದಿಯನ್ನು (ಡಿ.ಪಿ.ಆರ್.) ಪರಿಷ್ಕರಿಸಲು ಮೆಗಾವ್ಯಾಟ್ ಒಂದಕ್ಕೆ ಸರ್ಕಾರದ ಆದೇಶಾನುಸಾರ ವಿವರವಾದ ಯೋಜನಾ ವರದಿ ಪರಿಷ್ಕರಣ ಶುಲ್ಕವನ್ನು ತುಂಬುವುದು.

2(ಅ) ಯೋಜನಾ ಅಭಿವೃದ್ಧಿದಾರರು ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಂದಲೂ ಅಂದರೆ ಜಲಸಂಪನ್ಮೂಲ ಇಲಾಖೆ, ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಕಂದಾಯ ಇಲಾಖೆಗಳಿಂದ ಕ್ಲಿಯರೆನ್ಸ್‌ಗಾಗಿ ಅರ್ಜಿ ಸಲ್ಲಿಸತಕ್ಕದ್ದು ಒಡಂಬಡಿಕೆ ಮಾಡಿಕೊಂಡ ಒಂದು ವರ್ಷದೊಳಗಾಗಿ ವಿವರವಾದ ಯೋಜನಾ ವರದಿಯನ್ನು ಸಲ್ಲಿಸತಕ್ಕದ್ದು.

(ಆ) ಹಂಚಿಕೆದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಠೇವಣಿ ಇಡುವ ಹಣವನ್ನು, ವಿವರವಾದ ಯೋಜನಾ ವರದಿಯನ್ನು (ಡಿಪಿಆರ್) ಆವಿಷ್ಕರಿಸುವುದಕ್ಕೋಸ್ಕರ ಹೊಂದಾಣಿಕೆ ಮಾಡಿಕೊಳ್ಳಲಾಗುವುದು.

3. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ಯೋಜನಾ ವರದಿಗೆ ತಾಂತ್ರಿಕ ಅನುಮೋದನೆ ಕೊಟ್ಟ ಆರು ತಿಂಗಳ ಒಳಗಾಗಿ ಫೈನಾನ್ಸಿಯಲ್ ಕ್ಲೋಷರನ್ನು ಸಾಧಿಸತಕ್ಕದ್ದು.

4. ಫೈನಾನ್ಸಿಯಲ್ ಕ್ಲೋಷರನ್ನು ಸಾಧಿಸಿದ 24 ತಿಂಗಳ ಒಳಗಾಗಿ ಯೋಜನೆಯನ್ನು ಮುಗಿಸುವ ನಿಟ್ಟಿನಲ್ಲಿ ಹಂಚಿಕೆದಾರರು ಕಾರ್ಯಪ್ರವೃತ್ತರಾಗತಕ್ಕದ್ದು.

5. ಮೇಲೆ ತಿಳಿಸಿದ 2,3 ಮತ್ತು 4 ಅಂಶಗಳ ಯೋಜನಾ ಅನುಷ್ಠಾನ ಮಾಡಲು ಸಫಲವಾಗದಿದ್ದಲ್ಲಿ ಈ ಹಂಚಿಕೆಯು ತಂತಾನೇ ಯಾವ ಮುನ್ಸೂಚನೆಯನ್ನು ನೀಡದೆ ರದ್ದಾಗುವುದೆಂದು ತಿಳಿಯತಕ್ಕದ್ದು.

6. ಯೋಜನಾ ಅಭಿವೃದ್ಧಿದಾರರು ವಿದ್ಯುತ್ತನ್ನು ಮೂರನೆಯವರಿಗೆ ಮಾರಾಟ ಮಾಡುವ ಸಂದರ್ಭದಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆ ಮಾಡಿಕೊಳ್ಳಲು ಮತ್ತು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ ವಿದ್ಯುತ್ತನ್ನು ಮಾರಾಟ ಮಾಡುವ ಸಂದರ್ಭದಲ್ಲಿ ವಿದ್ಯುತ್ ಖರೀದಿ ಒಡಂಬಡಿಕೆ (ಪಿಪಿಎ) ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

7. ಈ ವಿಷಯದಲ್ಲಿ ಹಂಚಿಕೆದಾರರು ರಾಜ್ಯ ಮತ್ತು ಜಿಲ್ಲಾ ಮಟ್ಟಕ್ಕೆ ಸಂಬಂಧಿಸಿದ ಅಧಿಕಾರಿಗಳ ಸಹಾಯ/ಸಹಕಾರವನ್ನು ಪಡೆದು ನಿಗದಿತ ಅವಧಿಯೊಳಗೆ ಯೋಜನಾ ಅನುಷ್ಠಾನ ಪೂರ್ಣಗೊಳಿಸತಕ್ಕದ್ದು.

8. ಈ ಕಿರು ಜಲ ವಿದ್ಯುತ್ ಯೋಜನೆಯ ಸ್ಥಳದಲ್ಲಿ ಯಾವುದಾದರೂ ಸರ್ಕಾರಿ ಜಲ ವಿದ್ಯುತ್/ನೀರಾವರಿ/ಕುಡಿಯುವ ನೀರಿನ ಯೋಜನೆಗಳು ಬಂದಲ್ಲಿ ಸರ್ಕಾರಿ ಯೋಜನೆಗಳಿಗೆ ಮೊದಲ ಆದ್ಯತೆ ದೊರಕುವುದು ಹಾಗೂ ಈ ಯೋಜನೆಗೆ ಯಾವುದಾದರೂ ಇತರೆ ಯೋಜನೆಗಳಿಂದ ಧಕ್ಕೆಯಾದಲ್ಲಿ ಯಾವುದೇ ಪರಿಹಾರವನ್ನು ಅಭಿವೃದ್ಧಿದಾರರು ನಿರೀಕ್ಷಿಸುವಂತಿಲ್ಲ.
9. ಸ್ಥಳೀಯವಾಗಿ ಉದ್ಭವಿಸುವ ಯಾವುದಾದರೂ ಆಕ್ಷೇಪಣೆಗಳಿಗೆ ಅಭಿವೃದ್ಧಿದಾರರೇ ಸಂಪೂರ್ಣವಾಗಿ ಹೊಣೆಗಾರರಾಗಿರುತ್ತಾರೆ.
10. ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ ಯಾವುದೇ ಯೋಜನೆಗಳಿಂದಾಗಿ ಸದರಿ ಯೋಜನೆಯು ಮುಳುಗಡೆಯಾದಲ್ಲಿ, ಒದಗಬಹುದಾದ ಸಂಪೂರ್ಣ ತೊಂದರೆಗಳಿಗೆ ಅಭಿವೃದ್ಧಿದಾರರೇ ಪೂರ್ಣ ಜವಾಬ್ದಾರರಾಗಿರುತ್ತಾರೆ.
11. ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.
12. ಡಿ.ಪಿ.ಆರ್. ತಯಾರು ಮಾಡಿದ ಮೇಲೆ ಕ್ರೆಡಲ್ ಸಂಸ್ಥೆಯು ಪರಿಶೀಲಿಸಿದ ನಂತರ ಇತರ ಸಂಬಂಧಿಸಿದ ಇಲಾಖೆಗಳಿಗೆ ಡಿ.ಪಿ.ಆರ್. ಸಲ್ಲಿಸುವುದು ಹಾಗೂ ತದನಂತರ ತಾಂತ್ರಿಕ ಅನುಮೋದನೆಗಾಗಿ ಕ್ರೆಡಲ್‌ಗೆ ಅರ್ಜಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್. ಜೆ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ

ಪಿ.ಆರ್. 1203

ENERGY SECRETARIAT

CORRIGENDUM

No. EN 29 PPC 2010, Bangalore, Dated 03-05-2010

The words "April & May 2010" appearing in the second line of para 4 of the preamble portion and in the third line of para 1 of the order portion of the Government Order No. EN 29 EEB 2010 dated 6th April 2010 **shall be substituted by the following "April, May and June 2010"**

The date and month mentioned in the second line of para 5 of the Order portion of the above said Government Order as **"31st May 2010" shall be substituted by the following "30th June 2010".**

By Order and in the name of the Governor of Karnataka

S. J. SAMPATH KUMAR
Under Secretary to Govt.
Energy Department

P.R. 1204

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : ಶ್ರೀಮತಿ ಎಸ್. ಇಂದುಮತಿ, ಸರ್ಕಾರದ ಉಪ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಇವರು ನವದೆಹಲಿಯಲ್ಲಿ ನಡೆಯಲಿರುವ "National Project Committee on the Enforcement of Cyber Law" ಸಮ್ಮೇಳನದಲ್ಲಿ ದೆಹಲಿಗೆ ಭಾಗವಹಿಸುವ ಕುರಿತು.

ಓದಲಾಗಿದೆ : 1) ಚೇರ್‌ಪರ್ಸನ್, ಸೈಬರ್ ಅಪ್ಲೈಟ್ ಟ್ರಿಬುನಲ್, ಮಾಹಿತಿ ತಂತ್ರಜ್ಞಾನ ಇಲಾಖೆ, ನವದೆಹಲಿ, ಇವರ ಪತ್ರ ದಿನಾಂಕ 01-04-2010 ಮತ್ತು 23-04-2010.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಇವರ ಪತ್ರ ಸಂಖ್ಯೆ : ಐಟಿಡಿ/09/ಪಿಆರ್‌ಎಂ/2010 ದಿನಾಂಕ 21-04-2010.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 01-04-2010ರ ಚೇರ್ ಪರ್ಸನ್, ಸೈಬರ್ ಅಪ್ಲೈಟ್ ಟ್ರಿಬುನಲ್, ಮಾಹಿತಿ ತಂತ್ರಜ್ಞಾನ ಇಲಾಖೆ, ನವದೆಹಲಿ, ಇವರ ಪತ್ರದಲ್ಲಿ ದಿನಾಂಕ 08-05-2010 ರಂದು ಸಿಂಫೋಸಿಯಮ್ ಹಾಲ್, ಎನ್.ಎ.ಎಸ್.ಸಿ.

ಪೂಸ. ಇಲ್ಲಿ ನಡೆಯುವ National Project Committee on Enforcement of Cyber Law ಗೆ ಸಂಬಂಧಪಟ್ಟ National Seminar ನಲ್ಲಿ ಭಾಗವಹಿಸಲು ಓದಲಾದ ದಿನಾಂಕ 21-04-2010ರ ಪತ್ರದಲ್ಲಿ ಅಧಿಕಾರಿಯನ್ನು ನಿಯೋಜಿಸಲು ನಿರ್ದೇಶಿಸಿರುತ್ತಾರೆ.

ಅದರಂತೆ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸರ್ಕಾರಿ ಆದೇಶ ಸಂಖ್ಯೆ: ಐಟಿಡಿ 09 ಪಿಆರ್‌ಎಂ 2010, ಬೆಂಗಳೂರು, ದಿನಾಂಕ: 04-05-2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಶ್ರೀಮತಿ ಎಸ್. ಇಂದುಮತಿ, ಸರ್ಕಾರದ ಉಪ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಇವರನ್ನು ದಿನಾಂಕ 08-05-2010 ರಂದು ಸಿಂಫೋಸಿಯಮ್ ಹಾಲ್, ಎನ್.ಎ.ಎಸ್.ಸಿ. ಪೂಸ, ಇಲ್ಲಿ ನಡೆಯುವ National Seminar on Enforcement of Cyber Law ನಲ್ಲಿ ಭಾಗವಹಿಸಲು ನಿಯೋಜಿಸಲಾಗಿದೆ.

ಸದರಿ ಅಧಿಕಾರಿಯು ದಿನಾಂಕ 07-05-2010 ರಂದು ಕೇಂದ್ರ ಸ್ಥಾನ ಬಿಟ್ಟು ದಿನಾಂಕ 09-05-2010 ರಂದು ಕೇಂದ್ರ ಸ್ಥಾನಕ್ಕೆ ಹಿಂದಿರುಗುವಂತೆ ಆದೇಶಿಸಿದೆ, ಮತ್ತು ಸದರಿ ಅಧಿಕಾರಿಯ ಪ್ರವಾಸದ ಅವಧಿಯ ಗೈರುಹಾಜರಿಯನ್ನು ಕರ್ತವ್ಯದ ಮೇಲೆ ಎಂದು ಪರಿಗಣಿಸಿ, ಅಧಿಕಾರಿಯವರು ಪ್ರವಾಸದ ಅವಧಿಗೆ ನಿಯಮಾನುಸಾರ ಸಾರಿಗೆ ಭತ್ಯೆ, ದಿನ ಭತ್ಯೆ ಇತ್ಯಾದಿಗಳಿಗೆ ಅರ್ಹರಾಗಿರುತ್ತಾರೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ 10-7-1996 ರಲ್ಲಿ ಇಲ್ಲಾಖಾ ಕಾರ್ಯದರ್ಶಿಗಳಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಮ್. ವಿ. ಕೃಷ್ಣಮೂರ್ತಿ
ಸರ್ಕಾರದ ಅಧೀನ ಕಾರ್ಯದರ್ಶಿ
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ
ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ

ಪಿಆರ್. 1205

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸೇವೆಯನ್ನು ಕೇಂದ್ರದಲ್ಲಿ ವಿಲೀನಗೊಳಿಸುವ ಬಗ್ಗೆ ಸಮಿತಿ ರಚಿಸುವ ಬಗ್ಗೆ.

ಓದಲಾಗಿದೆ : ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರ ಪತ್ರದ ಸಂಖ್ಯೆ ಕರಾದೂಸಂಅಕೇಂ/63 ಜಿಇಎನ್ 2010, ದಿನಾಂಕ 17-4-2010.

ಪ್ರಸ್ತಾವನೆ :

ಮೇಲೆ ಓದಲಾದ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರ ದಿನಾಂಕ 17-4-2010ರ ಪತ್ರದಲ್ಲಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಅಡಿಯಲ್ಲಿ ಬರುವ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸೇವೆಯನ್ನು ಸದರಿ ಕೇಂದ್ರದಲ್ಲಿ ವಿಲೀನಗೊಳಿಸುವ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ವರದಿ ನೀಡಲು ಉಪಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಹಾಗೂ ಆರ್ಥಿಕ ಇಲಾಖೆ ಕಾನೂನು ಇಲಾಖೆ ಮತ್ತು ಸಿ.ಆ.ಸು.ಇ. (ಸೇವಾ ನಿಯಮಗಳು) ಇಲಾಖೆಗಳಲ್ಲಿನ ಉಪ ಕಾರ್ಯದರ್ಶಿಯವರ ಹುದ್ದೆಯ ಶ್ರೇಣಿಗೆ ಕಡಿಮೆಯಿಲ್ಲದ ಸದಸ್ಯರುಗಳು ಮತ್ತು ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರು ಇವರುಗಳನ್ನು ಒಳಗೊಂಡ ಸಮಿತಿಯನ್ನು ರಚಿಸಲು ದಿನಾಂಕ 23-3-2010 ರಂದು ನಡೆದ ಸದರಿ ಕೇಂದ್ರದ ಕಾರ್ಯಕಾರಿಣಿ ಸಮಿತಿಯ ಸಭೆಯಲ್ಲಿ ನಿರ್ಣಯಿಸಿರುವ ಬಗ್ಗೆ ಉಲ್ಲೇಖಿಸುತ್ತಾ, ಸಮಿತಿ ರಚನೆಯ ಕುರಿತು ಆದೇಶ ಹೊರಡಿಸಲು ಕೋರಲಾಗಿದೆ. ಅದರಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಐಟಿಡಿ 20 ಡಿಐಎಸ್ 2010, ಬೆಂಗಳೂರು, ದಿನಾಂಕ: 04-05-2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ದಿನಾಂಕ 23-3-2010ರಂದು ನಡೆದ ಸದರಿ ಕೇಂದ್ರದ ಕಾರ್ಯಕಾರಿಣಿ ಸಮಿತಿಯ ಸಭೆಯಲ್ಲಿ ನಿರ್ಣಯಿಸಿದಂತೆ ಸದರಿ ಕೇಂದ್ರದಲ್ಲಿನ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸೇವೆಯನ್ನು ಸದರಿ ಕೇಂದ್ರದಲ್ಲಿ

ವಿಲೀನಗೊಳಿಸುವ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರಕ್ಕೆ ವರದಿ ನೀಡಲು ಈ ಕೆಳಕಂಡ ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ.

1.	ಶ್ರೀಮತಿ ಎಸ್. ಇಂದುಮತಿ, ಸರ್ಕಾರದ ಉಪ ಕಾರ್ಯದರ್ಶಿ, ಮಾತಂ ಜೈತಂ ಹಾಗೂ ವಿತಂ ಇಲಾಖೆ (ಮಾತಂ ಜೈತಂ ವಿಭಾಗ)	ಅಧ್ಯಕ್ಷರು
2.	ಡಾ॥ ವಿ. ಶ್ರೀಧರ್, ವಿಜ್ಞಾನಿ, ಎಸ್.ಡಿ., ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ	ಸದಸ್ಯ ಕಾರ್ಯದರ್ಶಿ
3.	ಶ್ರೀ ಹೆಚ್. ಗಣೇಶಮೂರ್ತಿ, ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ	ಸದಸ್ಯರು
4.	ಶ್ರೀ ದೇವರಾಜ್, ಅಧೀನ ಕಾರ್ಯದರ್ಶಿ, ಸಿಆಸುಇ, (ಸೇವಾ ನಿಯಮಗಳು-1)	ಸದಸ್ಯರು
5.	ಶ್ರೀ ಎಂ. ಮಹದೇವಯ್ಯ, ಸರ್ಕಾರದ ಉಪ ಕಾರ್ಯದರ್ಶಿ (ಅಭಿಪ್ರಾಯ-4), ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆ	ಸದಸ್ಯರು

ಸದರಿ ಸಮಿತಿಯು ಒಂದು ತಿಂಗಳೊಳಗಾಗಿ ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಶ್ರೀ ಎಂ. ವಿ. ಕೃಷ್ಣಮೂರ್ತಿ, ಸರ್ಕಾರದ ಅಧೀನ ಕಾರ್ಯದರ್ಶಿ, ಇವರು ಸರ್ಕಾರದ ಹಂತದಲ್ಲಿ ಒದಗಿಸಲು ಎಲ್ಲಾ ವಿಧದಲ್ಲೂ ಸಹಕರಿಸತಕ್ಕದ್ದು.

